ನಮಃ ಪಾರ್ವತೀ ಪತಿನುತ ಜನಪರ ನಮೋ ವಿರೂಪಾಕ್ಷ || pa ||
ರಮಾ ರಮಣನಲಿ ಅಮಲ ಭಕುತಿ ಕೊಡು ನಮೋ ವಿಶಾಲಾಕ್ಷ || a. PA ||
ನೀಲಕಂಠ ತ್ರಿಶೂಲ ಡಮರು ಹಸ್ತಾಲಂಕೃತ ರಕ್ಷ
ಫಾಲನೇತ್ರ ಕಪಾಲ ರುಂಡ ಮಣಿ ಮಾಲಾಧೃತ ವಕ್ಷ
ಶೀಲರಮ್ಯ ವಿಶಾಲ ಸುಗುಣ ಸಲ್ಲೀಲ ಸುರಾಧ್ಯಕ್ಷ
ಶ್ರೀಲಕುಮೀಶನ ಒಲ್ಯೆಸುವ ಭಕ್ತಾವಳಿಗಳ ಪಕ್ಷ || 1 ||
ವಾಸವನುತ ಹರಿದಾಸ ಈಶ ಕೈಲಾಸ ವಾಸ ದೇವ
ದಾಶರಥಿಯ ಔಪಾಸಕ ಸುಜನರ ಪೋಷಿಪ ಪ್ರಭಾವ
ಭಾಸಿಸುತಿಹುದು ಅಶೇಷ ಜೀವರಿಗೆ ಈಶನೆಂಬ ಭಾವ
ಶ್ರೀಶನಲ್ಲಿ ಕೀಲಿಸುಮನವ ಗಿರಿಜೇಶ ಮಹಾದೇವ || 2 ||
ಮೃತ್ಯುಂಜಯ ನಿನ್ನುತ್ತಮ ಪದಯುಗ ಭೃತ್ಯನೋ ಸರ್ವತ್ರ
ಹತ್ತಿರ ಕರೆದು ಅಪತ್ಯನಂತೆ ಪೊರೆಯುತ್ತಿರೋ ತ್ರಿನೇತ್ರ
ತೆತ್ತಿಗನಂತೆ ಕಾಯುತ್ತಿಹೆ ಬಾಣನ ಸತ್ಯದಿ ಸುಚರಿತ್ರ
ಕರ್ತೃ ಉಡುಪಿ ಸರ್ವೋತ್ತಮ ಕೃಷ್ಣನ ಪೌತ್ರ ಕೃಪಾ ಪಾತ್ರ || 3 ||